**All India Radio: Bangalore**
**National Bulletin In Kannada**
**26.06.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**26.06.2026 1.10 p.m.**

**<><><><>**

ಮುಖ್ಯಾಂಶಗಳು

1. ಶ್ರೀರಾಮ ಜನ್ಮಭೂಮಿ ತೀರ್ಥಕ್ಷೇತ್ರ ದೇಣಿಗೆ ಪ್ರಕರಣ; ಉತ್ತರ ಪ್ರದೇಶ ಪೊಲೀಸರಿಂದ ಲ ಆರೋಪಿಗಳ ಬಂಧನ
2. ಲಂಡನ್‌ನಲ್ಲಿಂದು ಬ್ರಿಟನ್ ವಾಣಿಜ್ಯ ಮತ್ತು ಕೈಗಾರಿಕಾ ಸಚಿವರೊಂದಿಗೆ ಕೇಂದ್ರ ಸಚಿವ ಪಿಯೂಷ್ ಗೋಯಲ್ ಮಾತುಕತೆ
3. ವೆನೆಜುವೆಲಾ ಭೂಕಂಪ - ಮೃತರ ಸಂಖ್ಯೆ ೧೩೫ಕ್ಕೆ ಏರಿಕೆ; ತುರ್ತು ಪರಿಸ್ಥಿತಿ ಘೋಷಣೆ
4. ಫಿಫಾ ವಿಶ್ವಕಪ್ ಫುಟ್ಬಾಲ್; ಜರ್ಮನಿ ವಿರುದ್ಧ ಗೆದ್ದು ನಾಕೌಟ್ ಹಂತ ಪ್ರವೇಶಿಸಿದ ಈಕ್ವೆಡಾರ್

<><><><>

ಶ್ರೀರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ದೇಣಿಗೆ ಪ್ರಕರಣದಲ್ಲಿ ದಾಖಲಿಸಲಾದ ಮೊದಲ ಎಫ್‌ಐಆರ್‌ನಲ್ಲಿ ಹೆಸರಿಸಲಾದ ಎಂಟು ಜನರನ್ನು ಉತ್ತರ ಪ್ರದೇಶ ಪೊಲೀಸರು ಬಂಧಿಸಿದ್ದಾರೆ. ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರ ನಿರ್ದೇಶನದ ಮೇರೆಗೆ ರಚಿಸಲಾದ ವಿಶೇಷ ತನಿಖಾ ತಂಡದ ಶಿಫಾರಸುಗಳನ್ನು ಅನುಸರಿಸಿ ಎಫ್‌ಐಆರ್ ದಾಖಲಿಸಲಾಗಿದೆ. ಟ್ರಸ್ಟ್ ಸದಸ್ಯ ಕೃಷ್ಣಮೋಹನ್ ನೀಡಿದ ಲಿಖಿತ ದೂರಿನ ಆಧಾರದ ಮೇಲೆ ಶ್ರೀರಾಮ ಜನ್ಮಭೂಮಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಎಫ್‌ಐಆರ್‌ನಲ್ಲಿ ಅವಿನಾಶ್ ಶುಕ್ಲಾ, ಅನುಕಲ್ಪ್ ಮಿಶ್ರಾ, ಲವಕುಶ್ ಮಿಶ್ರಾ, ಮನೀಶ್ ಕುಮಾರ್ ಯಾದವ್, ಕರುಣೇಶ್ ಪಾಂಡೆ, ರಾಮಶಂಕರ್ ಮಿಶ್ರಾ, ಸುಭಾಷ್ ಶ್ರೀವಾಸ್ತವ ಮತ್ತು ರಾಮ್ ಶಂಕರ್ ಯಾದವ್ ಅಲಿಯಾಸ್ ಟಿನ್ನು ಸೇರಿದಂತೆ ಇತರ ಅಪರಿಚಿತ ಆರೋಪಿಗಳನ್ನು ಹೆಸರಿಸಲಾಗಿದೆ. ಲಕ್ನೋ ವಿಭಾಗೀಯ ಆಯುಕ್ತ ವಿಜಯ್ ವಿಶ್ವಾಸ್ ಪಂತ್ ನೇತೃತ್ವದ ಎಸ್‌ಐಟಿ ಮಂಗಳವಾರ ತನ್ನ ಪ್ರಾಥಮಿಕ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಈ ವಿಷಯದಲ್ಲಿ ಕಟ್ಟುನಿಟ್ಟಿನ ಶಿಫಾರಸುಗಳನ್ನು ಮಾಡಿದೆ. ಶಿಫಾರಸುಗಳನ್ನು ಅನುಸರಿಸಿ ನಿನ್ನೆ

ಎಫ್ಐಆರ್ ದಾಖಲಿಸಲಾಗಿದೆ. ಶ್ರೀರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ಸ್ವೀಕರಿಸಿದ ಕಾಣಿಕೆಗಳು ಮತ್ತು ಕಾಣಿಕೆಗಳನ್ನು ಒಳಗೊಂಡ ಕಳ್ಳತನದ ಆರೋಪಗಳು ಹೊರಬಂದ ನಂತರ ಪ್ರಕರಣ ಬೆಳಕಿಗೆ ಬಂದಿದೆ. ಟ್ರಸ್ಟ್ ವಿಶೇಷ ತನಿಖೆಗೆ ಮನವಿ ಮಾಡಿತ್ತು. ನಂತರ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಎಸ್ಐಟಿ ರಚನೆಗೆ ಆದೇಶಿಸಿದರು.

<><><><>

ಅಂತಾರಾಷ್ಟ್ರೀಯ ಮಾದಕ ದ್ರವ್ಯ ದುರುಪಯೋಗ ಮತ್ತು ಅಕ್ರಮ ಸಾಗಣೆ ವಿರುದ್ಧದ ದಿನದಂದು ನಶಾ ಮುಕ್ತ ಭಾರತವನ್ನು ನಿರ್ಮಿಸುವ ಸಾಮೂಹಿಕ ಸಂಕಲ್ಪವನ್ನು ಪುನರುಚ್ಚರಿಸುವಂತೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಜನರಿಗೆ ಕರೆ ನೀಡ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಈ ಆಂದೋಲನವನ್ನು ಸಕ್ರಿಯವಾಗಿ ಮುಂದಕ್ಕೆ ಕೊಂಡೊಯ್ಯುತ್ತಿರುವ ವಿಶ್ವವಿದ್ಯಾಲಯಗಳು, ಶಿಕ್ಷಣ ಸಂಸ್ಥೆಗಳು ಮತ್ತು ಸಂಸ್ಥೆಗಳನ್ನು ಶ್ಲಾಘಿಸಿದ್ದಾರೆ. ಬಲವಾದ, ಆರೋಗ್ಯಕರ ಮತ್ತು ವ್ಯಸನ ಮುಕ್ತ ಭಾರತವನ್ನು ನಿರ್ಮಿಸುವತ್ತ ಅವರ ಪ್ರಯತ್ನಗಳು ಅರ್ಥಪೂರ್ಣ ಕೊಡುಗೆ ನೀಡುತ್ತಿವೆ ಎಂದು ಹೇಳಿದರು. ಜಾಗೃತಿ ಮೂಡಿಸಲು, ಚೇತರಿಕೆಯಲ್ಲಿರುವವರನ್ನು ಬೆಂಬಲಿಸಲು ಮತ್ತು ವ್ಯಸನಕ್ಕಿಂತ ಭರವಸೆ, ಆರೋಗ್ಯ ಮತ್ತು ಉದ್ದೇಶವನ್ನು ಆಯ್ಕೆ ಮಾಡಲು ಮತ್ತು ಯುವಕರನ್ನು ಪ್ರೇರೇಪಿಸಲು ಎಲ್ಲರೂ ಒಟ್ಟಾಗಿ ನಿಲ್ಲಬೇಕೆಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಮನವಿ ಮಾಡಿದರು. ಇದೇ ವೇಳೆ ಮಾದಕ ವಸ್ತುಗಳ ವಿರುದ್ಧದ ಹೋರಾಟದಲ್ಲಿ ತೊಡಗಿರುವವರ ಪ್ರಯತ್ನಗಳನ್ನು ಶ್ಲಾಘಿಸಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ, ಮಾದಕ ವಸ್ತುಗಳ ದಂಧೆಗಳನ್ನು ನಿರ್ದಯವಾಗಿ ನಾಶಪಡಿಸಲಾಗಿದೆ ಎಂದು ಹೇಳಿದರು.

<><><><>

ದೇಶದ ವಿವಿಧ ಭಾಗಗಳಲ್ಲಿ ಇಂದು ಅಶೂರ-ಎ-ಮೊಹರಂ ಹಬ್ಬವನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಗುತ್ತಿದೆ. ಕರ್ಬಲಾದಲ್ಲಿ ಸತ್ಯ, ಸದಾಚಾರ ಮತ್ತು ನ್ಯಾಯವನ್ನು ಎತ್ತಿಹಿಡಿಯಲು ತಮ್ಮ ಪ್ರಾಣವನ್ನೇ ಅರ್ಪಿಸಿದ ಪ್ರವಾದಿ ಮುಹಮ್ಮದ್ ಅವರ ಮೊಮ್ಮಗ ಹಜರತ್ ಇಮಾಮ್ ಹುಸೇನ್ ಮತ್ತು ಅವರ ಸಹಚರರ ಹುತಾತ್ಮತೆಯನ್ನು ಈ ದಿನ ಗುರುತಿಸುತ್ತದೆ. ಈ ಸಂದರ್ಭದಲ್ಲಿ ತಾಜಿಯಾ ಮೆರವಣಿಗೆಗಳನ್ನು ಆಯೋಜಿಸಲಾಗಿದೆ. ಕರ್ಬಲಾ ಹುತಾತ್ಮರ ಅತ್ಯುನ್ನತ ತ್ಯಾಗವನ್ನು ಎತ್ತಿ ತೋರಿಸುವ ಮಜಾಲಿಗಳು ಅಥವಾ ಧಾರ್ಮಿಕ ಸಭೆಗಳನ್ನು ಸಹ

ಆಯೋಜಿಸಲಾಗಿದೆ. ಈ ಹಿನ್ನೆಲೆಯಲ್ಲಿ ವ್ಯಾಪಕವಾದ ಭದ್ರತಾ ವ್ಯವಸ್ಥೆಗಳನ್ನು ಮಾಡಲಾಗಿದೆ. ಅಶೂರ-ಎ-ಮೊಹರಂ ಸಂದರ್ಭದಲ್ಲಿ, ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಅನೇಕ ಗಣ್ಯರು, ಹಜರತ್ ಇಮಾಮ್ ಹುಸೇನ್ ಅವರ ತ್ಯಾಗವನ್ನು ಸ್ಮರಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಹಜರತ್ ಇಮಾಮ್ ಹುಸೇನ್ ಅವರು ಸತ್ಯ ಮತ್ತು ನ್ಯಾಯದ ಅನ್ವೇಷಣೆಯಲ್ಲಿ ದೃಢವಾಗಿ ಉಳಿಯಲು ಅನೇಕ ಜನರನ್ನು ಪ್ರೇರೇಪಿಸುತ್ತಿದ್ದಾರೆ. ಇದು ಧೈರ್ಯ ಮತ್ತು ದೃಢಸಂಕಲ್ಪದ ಶಾಶ್ವತ ಶಕ್ತಿಯನ್ನು ನೆನಪಿಸುತ್ತದೆ ಎಂದು ಹೇಳಿದ್ದಾರೆ.

<><><>

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರು ಲಂಡನ್‌ನಲ್ಲಿ ಬ್ರಿಟನ್ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪೀಟರ್ ಕೈಲ್ ಅವರೊಂದಿಗೆ ಮಾತುಕತೆ ನಡೆಸಿದರು. ಚರ್ಚೆ ವೇಳೆ ಭಾರತ-ಬ್ರಿಟನ್ ಆರ್ಥಿಕ ಮತ್ತು ವ್ಯಾಪಾರ ಸಹಕಾರವನ್ನು ಮತ್ತಷ್ಟು ಬಲಗೊಳಿಸಲು ಹೊಸ ಅವಕಾಶಗಳನ್ನು ಅನ್ವೇಷಿಸಿದ್ದೇವೆ. ಈ ಮಾತುಕತೆಯು ದ್ವಿಪಕ್ಷೀಯ ಪಾಲುದಾರಿಕೆಯನ್ನು ವ್ಯಾಖ್ಯಾನಿಸುವ ವಿಶ್ವಾಸ ಮತ್ತು ಭವಿಷ್ಯದ ದೃಷ್ಟಿಕೋನವನ್ನು ಪ್ರತಿಬಿಂಬಿಸುತ್ತದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ಮುಂದಿನ ತಿಂಗಳು ೧೫ ರಿಂದ ಜಾರಿಗೆ ಬರಲಿರುವ ಭಾರತ-ಬ್ರಿಟನ್ ಸಮಗ್ರ ಆರ್ಥಿಕ ಮತ್ತು ವ್ಯಾಪಾರ ಒಪ್ಪಂದ, ಎರಡೂ ರಾಷ್ಟ್ರಗಳಿಗೆ ನಾವೀನ್ಯತೆ, ಹೂಡಿಕೆ ಮತ್ತು ಸಮಗ್ರ ಬೆಳವಣಿಗೆಯನ್ನು ಉತ್ತೇಜಿಸುವ ಪರಿಸರ ವ್ಯವಸ್ಥೆಯನ್ನು ಬೆಳೆಸಲು ಎರಡೂ ಕಡೆಯವರು ಬದ್ಧರಾಗಿದ್ದಾರೆ ಎಂದು ಅವರು ತಿಳಿಸಿದ್ದಾರೆ.

<><><>

ವಾಷಿಂಗ್ಟನ್‌ನಲ್ಲಿ ನಡೆದ ಎರಡನೇ ಪ್ಯಾಕ್ಸ್ ಸಿಲಿಕಾ ಶೃಂಗಸಭೆಯಲ್ಲಿ ಕೃತಕಬುದ್ಧಿಮತ್ತೆ ತಂತ್ರಜ್ಞಾನಗಳಿಗೆ ಶಕ್ತಿ ತುಂಬಲು ವಿಶ್ವಾಸಾರ್ಹ ಮತ್ತು ಸ್ಥಿತಿಸ್ಥಾಪಕ ಪೂರೈಕೆ ಸರಪಳಿಗಳನ್ನು ನಿರ್ಮಿಸಲು ಭಾರತ ಸೇರಿದಂತೆ ೨೫ ರಾಷ್ಟ್ರಗಳು ಅಮೆರಿಕ ನೇತೃತ್ವದ ಉಪಕ್ರಮಕ್ಕೆ ಸಹಿ ಹಾಕಿವೆ. ಶೃಂಗಸಭೆಯಲ್ಲಿ ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯದ ಕಾರ್ಯದರ್ಶಿ ಎಸ್. ಕೃಷ್ಣನ್ ನೇತೃತ್ವದ ನಿಯೋಗ ಭಾಗವಹಿಸಿತ್ತು. ಅರೆವಾಹಕಗಳು, ಕೃತಕಬುದ್ಧಿಮತ್ತೆ ಮತ್ತು ಸ್ಥಿತಿಸ್ಥಾಪಕ ತಂತ್ರಜ್ಞಾನ ಪೂರೈಕೆ ಸರಪಳಿಗಳಲ್ಲಿ ಸಹಯೋಗವನ್ನು

ಮುಂದುವರಿಸುವ ಕುರಿತು ಉದ್ಯಮದ ನಾಯಕರೊಂದಿಗೆ ಭಾರತೀಯ ನಿಯೋಗ ಚರ್ಚೆ ನಡೆಸಿತು.

<><><><>

ಕಿರ್ಗಿಸ್ತಾನದ ಬಿಷ್ಕೆಕ್‌ನಲ್ಲಿ ನಡೆದ ಶಾಂಘೈ ಸಹಕಾರ ಸಂಸ್ಥೆಯ ಮಹಿಳಾ ವೇದಿಕೆ ೨೦೨೬ರಲ್ಲಿ ಭಾರತ, ಮಹಿಳೆಯರ ನೇತೃತ್ವದ ಅಭಿವೃದ್ಧಿಗೆ ತನ್ನ ಬದ್ಧತೆಯನ್ನು ಪುನರುಚ್ಚರಿಸಿದೆ. ಇಂದು ವರ್ಚುವಲ್ ಮೂಲಕ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಅನ್ನಪೂರ್ಣಾ ದೇವಿ, ಮಹಿಳೆಯರು ಕೇವಲ ಬೆಳವಣಿಗೆಯ ಫಲಾನುಭವಿಗಳಲ್ಲ, ಬದಲಾಗಿ ೨೦೪೭ರ ವೇಳೆಗೆ ವಿಕಸಿತ ಭಾರತದ ಅತ್ಯಂತ ಶಕ್ತಿಶಾಲಿ ಚಾಲಕರು ಎಂದು ಪ್ರತಿಪಾದಿಸಿದರು. ಭಾರತದಲ್ಲಿ ಸುಮಾರು ನೂರು ದಶಲಕ್ಷ ಮಹಿಳೆಯರು ೯ ದಶಲಕ್ಷಕ್ಕಿಂತಲೂ ಹೆಚ್ಚು ಸ್ವಸಹಾಯ ಗುಂಪುಗಳಲ್ಲಿ ಸಂಘಟಿತರಾಗಿದ್ದಾರೆ. ಇವರಲ್ಲಿ ೩೦ ದಶಲಕ್ಷಕ್ಕಿಂತಲೂ ಹೆಚ್ಚು ಮಹಿಳೆಯರು ಲಖ್‌ಪತಿ ದೀದಿಗಳಾಗಿದ್ದಾರೆ ಎಂದು ತಿಳಿಸಿದರು. ಮಿಷನ್ ಶಕ್ತಿ ಮತ್ತು ಮಿಷನ್ ಪೋಷಣ್ ೨.೦ ನಂತಹ ಯೋಜನೆಗಳು ಮಹಿಳೆಯರ ಸುರಕ್ಷತೆ, ಆರೈಕೆ ಮತ್ತು ಆರ್ಥಿಕ ಭಾಗವಹಿಸುವಿಕೆಯನ್ನು ಮುನ್ನಡೆಸುತ್ತಿವೆ ಎಂದು ಸಚಿವೆ ಅನ್ನಪೂರ್ಣಾದೇವಿ ಹೇಳಿದರು.

<><><><>

ವೆನೆಜುವೆಲಾದಲ್ಲಿ ಸಂಭವಿಸಿದ ಎರಡು ಪ್ರಬಲ ಭೂಕಂಪಗಳಲ್ಲಿ ಸಾವನ್ನಪ್ಪಿದವರ ಸಂಖ್ಯೆ ೨೩೫ಕ್ಕೆ ಏರಿಕೆಯಾಗಿದೆ. ಒಂದು ಸಾವಿರದ ೫೦೦ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಅವಶೇಷಗಳಡಿ ಸಿಲುಕಿರುವವರ ರಕ್ಷಣಾ ಕಾರ್ಯ ಭರದಿಂದ ಸಾಗಿದೆ. ವೆನೆಜುವೆಲಾ ರಾಜಧಾನಿ ಕ್ಯಾರಕಾಸ್‌ನ ಪಶ್ಚಿಮಕ್ಕೆ ೧೬೦ ಕಿಲೋಮೀಟರ್ ದೂರದಲ್ಲಿ ೭.೨ ಮತ್ತು ೭.೫ ತೀವ್ರತೆಯ ಪ್ರಬಲ ಭೂಕಂಪಗಳು ಸಂಭವಿಸಿದ ನಂತರ ಕನಿಷ್ಠ ಎರಡು ಸಾವಿರದ ೯೨೭ ಕುಟುಂಬಗಳು ತಮ್ಮ ಮನೆಗಳನ್ನು ಕಳೆದುಕೊಂಡಿವೆ. ದೇಶದ ಹಂಗಾಮಿ ಅಧ್ಯಕ್ಷೆ ಡೆಲ್ಸಿ ರೊಡ್ರಿಗಸ್ ತುರ್ತು ಪರಿಸ್ಥಿತಿ ಘೋಷಿಸಿದ್ದಾರೆ. ಹಲವಾರು ದೇಶಗಳು ರಕ್ಷಣಾ ಕಾರ್ಯಗಳಿಗೆ ಸಹಾಯ ಮಾಡಲು ಮುಂದೆ ಬಂದಿವೆ. ಭೂಕಂಪಗಳ ನಂತರ ಭಾರತ ವ್ಯಕ್ತಪಡಿಸಿದ ಸೌಹಾರ್ದತೆಯನ್ನು ಡೆಲ್ಸಿ ರೊಡ್ರಿಗಸ್ ಶ್ಲಾಘಿಸಿದ್ದಾರೆ.

<><><><>

ಭಾರತ, ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಜಾಗತಿಕ ನಾಯಕನಾಗಿ ಹೊರಹೊಮ್ಮಿದೆ ಎಂದು ಜರ್ಮನ್ ರಾಯಭಾರಿ ಫಿಲಿಪ್ ಅಕೆರ್ಮನ್ ಹೇಳಿದ್ದಾರೆ. ಸುದ್ದಿ ಸಂಸ್ಥೆಯೊಂದಕ್ಕೆ ನೀಡಿದ ಸಂದರ್ಶನದಲ್ಲಿ ಅವರು, ವ್ಯಾಪಾರ, ರಾಜಕೀಯ ಮತ್ತು ಕಾರ್ಯತಂತ್ರ ಕ್ಷೇತ್ರಗಳಲ್ಲಿ ಭಾರತ ಮತ್ತು ಜರ್ಮನಿ ಬಲವಾದ ಸಹಕಾರವನ್ನು ಹೊಂದಿವೆ. ಬಹುನಿರೀಕ್ಷಿತ ಭಾರತ ಐರೋಪ್ಯ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದದಿಂದಾಗಿ ಜರ್ಮನ್ ಉದ್ಯಮಿಗಳು ಭಾರತದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಹೂಡಿಕೆ ಮಾಡಲು ಗಮನಾರ್ಹವಾಗಿ ಪ್ರೋತ್ಸಾಹಿಸುತ್ತಿದೆ ಎಂದು ತಿಳಿಸಿದ್ದಾರೆ. ಪ್ರಸ್ತುತ ಜರ್ಮನಿಯಲ್ಲಿ ಸುಮಾರು ೬೦ ಸಾವಿರ ಭಾರತೀಯ ವಿದ್ಯಾರ್ಥಿಗಳು ಅಧ್ಯಯನ ಮಾಡುತ್ತಿದ್ದಾರೆ ಮತ್ತು ಜರ್ಮನಿಯಲ್ಲಿ ನೆಲೆಸಿರುವ ಭಾರತೀಯ ವಲಸಿಗರ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಿದೆ ಎಂದು ಫಿಲಿಪ್ ಅಕೆರ್ಮನ್ ಹೇಳಿದ್ದಾರೆ.

<><><><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ಇದೇ ಭಾನುವಾರ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೫ನೇ ಆವೃತ್ತಿಯಾಗಿದೆ.  ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ.  ಈ ಕಾರ್ಯಕ್ರಮ ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ.

<><><><>

ನ್ಯೂಜೆರ್ಸಿ ಕ್ರೀಡಾಂಗಣದಲ್ಲಿಂದು ನಡೆದ ಫಿಫಾ ವಿಶ್ವಕಪ್ ಫುಟ್ಬಾಲ್ ಪಂದ್ಯಾವಳಿಯ 'ಇ' ಗುಂಪಿನ ಪಂದ್ಯದಲ್ಲಿ ಜರ್ಮನಿ ತಂಡವನ್ನು ೨-೧ ಗೋಲುಗಳಿಂದ ಸೋಲಿಸಿ, ಈಕ್ವೆಡಾರ್ ತಂಡ ನಾಕೌಟ್ ಹಂತಕ್ಕೆ ಪ್ರವೇಶಿಸಿದೆ.  ಇದಕ್ಕೂ ಮುನ್ನ ಫಿಲಿಡೆಲ್ಫಿಯಾದಲ್ಲಿ ನಡೆದ ಮತ್ತೊಂದು ಪಂದ್ಯದಲ್ಲಿ ಕ್ಯೂರಾಕೊ ವಿರುದ್ಧ ೨-೦ ಗೋಲುಗಳಿಂದ ಜಯಗಳಿಸಿದ ಕೋಟ್ ಡಿ ಐವರಿ ತಂಡ ನಾಕೌಟ್ ಹಂತ ಪ್ರವೇಶಿಸಿತು.  ಡಲ್ಲಾಸ್ ಕ್ರೀಡಾಂಗಣದಲ್ಲಿಂದು ನಡೆದ 'ಎಫ್' ಗುಂಪಿನ

ಹಣಾಹಣಿಯಲ್ಲಿ ೧-೧ ಗೋಲುಗಳ ಮೂಲಕ ಡ್ರಾ ಸಾಧಿಸಿದ ಜಪಾನ್ ಮತ್ತು ಸ್ವೀಡನ್ ಎರಡೂ ತಂಡಗಳು ನಾಕೌಟ್ ಹಂತ ತಲುಪಿತು. ೩೨ನೇ ಸುತ್ತಿನಲ್ಲಿ ಜಪಾನ್ ಈಗ ೫ ಬಾರಿಯ ಚಾಂಪಿಯನ್ ಬ್ರೆಜಿಲ್ ತಂಡವನ್ನು ಎದುರಿಸಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>